# <u>ಪತ್ರಿಕಾ ಪ್ರಕಟಣೆ</u>

## ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ನಾಮ ನಿರ್ದೇಶನಗಳನ್ನು ಸಲ್ಲಿಸುವ ಬಗ್ಗೆ

*******

ಕರ್ನಾಟಕ ಸರಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಟ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವಂತಹ ವ್ಯಕ್ತಿಗಳಿಗೆ ತಲಾ ರೂ. 25000/- ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ, 1.00 ಲಕ್ಷಗಳ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಮಕ್ಕಳ ದಿನಾಚರಣೆಯಂದು ಪ್ರದಾನ ಮಾಡಿ ಗೌರವಿಸುತ್ತದೆ.

2018 ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿಮಾಡಿದ ಅರ್ಜಿಗಳನ್ನು ದ್ವಿ-ಪ್ರತಿಯಲ್ಲಿ ಸಂಬಂಧ ಪಟ್ಟ ಜಿಲ್ಲೆಯ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉಡುಪಿ ಜಿಲ್ಲೆ ಇವರಿಗೆ ದಿನಾಂಕ 20-8-2018 ರೊಳಗೆ ಸಲ್ಲಿಸತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ, ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು,

ಅರ್ಜಿ ನಮೂನೆ ಹಾಗೂ ಹೆಚ್ಚಿನ ವಿವರಣೆಗಳಿಗಾಗಿ, ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ-204, 1 ನೇ ಮಹಡಿ, ರಜತಾದ್ರಿ, ಮಣಿಪಾಲ ದೂರವಾಣಿ- 0820-2574972 ನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಉಡುಪಿ